# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 601 |
| ಸದಸ್ಯರ ಹೆಸರು | : | ಶ್ರೀ ಎನ್ ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 13.12.2024. |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಇ-ಸ್ವತ್ತು ತಂತ್ರಾಂಶದಲ್ಲಿ ಇ-ಸ್ವತ್ತು ನಮೂನೆಗಳ ವಿತರಣೆಯನ್ನು ಯಾವ ನಿಯಮದ ಅಡಿಯಲ್ಲಿ ಕಾರ್ಯಗತಗೊಳಿಸಲಾಗುತ್ತದೆ; | ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯವು ರಿಟ್ ಅರ್ಜಿ ಸಂಖ್ಯೆ:12278/2007, ದಿನಾಂಕ:07-07-2008 ರಲ್ಲಿ ನಗರ ಮತ್ತು ಗ್ರಾಮಾಂತರ ಪ್ರದೇಶದಲ್ಲಿ ಭೂ ಪರಿವರ್ತನಾ ಆದೇಶ ಇಲ್ಲದ ಮತ್ತು ಬಡಾವಣೆ ನಕ್ಷೆ ಅನುಮೋದನೆ ಇಲ್ಲದ ಆಸ್ತಿಗಳ ಕಾನೂನುಬಾಹಿರ ನೋಂದಣಿಯನ್ನು ತಡೆಹಿಡಿಯುವ ಸಲುವಾಗಿ ಒಂದು ವ್ಯವಸ್ಥೆಯನ್ನು ರೂಪಿಸುವಂತೆ ಹಾಗೂ ಅನಧಿಕೃತ ಆಸ್ತಿಗಳ ನೊಂದಣಿಯನ್ನು ಕೂಡಲೇ ನಿಲ್ಲಿಸುವಂತೆ ಆದೇಶಿಸಿರುವ ಹಿನ್ನಲೆಯಲ್ಲಿ ಮಾಹಿತಿ ತಂತ್ರಜ್ಞಾನ ವ್ಯವಸ್ಥೆ ಮತ್ತು ನೀತಿ ರೂಪಿಸಿ ತಂತ್ರಾಂಶ ಅಭಿವೃದ್ಧಿಯ ಮೂಲಕ ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿ ಅನಧಿಕೃತ ಆಸ್ತಿಗಳ ನೋಂದಣಿಯನ್ನು ನಿಯಂತ್ರಿಸಲು ಮತ್ತು ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಆಸ್ತಿಗಳ ನಿರ್ವಹಣೆ ಇ-ಆಡಳಿತದ ಮೂಲಕ ಆಸ್ತಿಗಳ ಮಾಲೀಕರಿಗೆ ತಮ್ಮ ಸ್ಥಿರಾಸ್ತಿಗಳ ಬಗ್ಗೆ ಸುಲಭವಾದ ಸೌಲಭ್ಯವನ್ನು ಆನ್‌ಲೈನ್ ಮೂಲಕ ಒದಗಿಸುವ ಉದ್ದೇಶದಿಂದ ಇ-ಸ್ವತ್ತು ತಂತ್ರಾಂಶವನ್ನು ಅಭಿವೃದ್ಧಿಪಡಿಸಲಾಗಿದೆ.<br><br>ಅದರಂತೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಗಳ ಆಯವ್ಯಯ ಮತ್ತು ಲೆಕ್ಕಪತ್ರಗಳು) ನಿಯಮಗಳು, 2006 ರ ನಿಯಮ 28 ಮತ್ತು 30 ರಂತೆ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಕ್ರಮಬದ್ಧ ಆಸ್ತಿಗಳಿಗೆ ನಿಗದಿತ ನಮೂನೆ 9 ಹಾಗೂ 11 ಎ ಗಳನ್ನು ಹಾಗೂ ಕ್ರಮಬದ್ಧವಲ್ಲದ ಆಸ್ತಿಗಳಿಗೆ ನಮೂನೆ-11ಬಿ ಯನ್ನು ಪಂಚಾಯತಿ ಅಭಿವೃದ್ಧಿ ಅಧಿಕಾರಿಯ ಡಿಜಿಟಲ್ ಸಹಿಯ ಮೂಲಕ ವಿತರಿಸಲಾಗುತ್ತಿದೆ. |
| (ಆ) | ಇ-ಸ್ವತ್ತು ತಂತ್ರಾಂಶದಲ್ಲಿ ಹಾಗೂ ವಿತರಿಸಲಾಗುವ ನಮೂನೆಗಳ ಆಧಾರದಲ್ಲಿ ಆಸ್ತಿಗಳ ನೋಂದಣೆ ಮತ್ತು ಹಕ್ಕು ಬದಲಾವಣೆಗೆ ಇಲಾಖೆಯ ನಿಯಮಗಳಲ್ಲಿ ಅವಕಾಶವಿದೆಯೇ; | ಇ-ಸ್ವತ್ತು ತಂತ್ರಾಂಶದಲ್ಲಿ ವಿತರಿಸಲಾಗುವ ನಮೂನೆಗಳ ಆಧಾರಗಳಲ್ಲಿ ಆಸ್ತಿಗಳ ನೋಂದಣೆ ಮಾಡಲು ಅವಕಾಶವಿರುತ್ತದೆ.<br><br>ಹಕ್ಕು ಬದಲಾವಣೆಗೆ ನಿಯಮಗಳಲ್ಲಿ ಅವಕಾಶ ಇರುವುದಿಲ್ಲ. |

| | | |
|---|---|---|
| (ಇ) | ಇ-ಸ್ವತ್ತು ತಂತ್ರಾಂಶದಲ್ಲಿ ಇಲ್ಲಿಯವರೆಗೆ ಎಷ್ಟು ಕ್ರಮಬದ್ಧ ಮತ್ತು ಎಷ್ಟು ಕ್ರಮಬದ್ಧವಲ್ಲದ ಆಸ್ತಿಗಳಿಗೆ ಇ-ಸ್ವತ್ತು ನಮೂನೆಗಳನ್ನು ವಿತರಿಸಲಾಗಿದೆ; | ಇ-ಸ್ವತ್ತು ತಂತ್ರಾಂಶದಲ್ಲಿ ದಿನಾಂಕ:15-06-2013 ರಿಂದ ದಿನಾಂಕ:03-12-2014 ರವರೆಗೆ 35,88,966 ಕ್ರಮಬದ್ಧ ಆಸ್ತಿಗಳಿಗೆ ನಮೂನೆ -9 ಮತ್ತು 11ಎ ಮತ್ತು 9,51,857ಕ್ರಮಬದ್ಧವಲ್ಲದ ಆಸ್ತಿಗಳಿಗೆ ನಮೂನೆ-11ಬಿ ವಿತರಿಸಲಾಗಿದೆ. |
| (ಈ) | ನಾಗರೀಕ ಸೌಲಭ್ಯ ನಿವೇಶನ, ಉದ್ಯಾನವನಗಳನ್ನು ಕಾಯ್ದಿರಿಸದೆ ಅನಧಿಕೃತವಾಗಿ ವಿನ್ಯಾಸ/ನಕ್ಷೆ ಅನುಮೋದಿಸಿದ ಅನಧಿಕೃತ ಬಡಾವಣೆಗಳ ನಿವೇಶನಗಳಿಗೆ ಇ-ಸ್ವತ್ತು ನಮೂನೆ ವಿತರಣೆ ಮಾಡಿರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ: (ವಿವರಗಳನ್ನು ನೀಡುವುದು) | ಬಂದಿಲ್ಲ. |
| (ಉ) | ಇ-ಸ್ವತ್ತು ತಂತ್ರಾಂಶದಲ್ಲಿ ಸುಳ್ಳು ದಾಖಲೆ ಪ್ರತಿಗಳನ್ನು ಅಪ್ ಲೋಡ್ ಮಾಡಿ ಇ-ಸ್ವತ್ತು ನಮೂನೆಗಳನ್ನು ವಿತರಿಸಿರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ? (ಮಾಹಿತಿ ನೀಡಿ) | ಬಂದಿಲ್ಲ. |

ಸಂಖ್ಯೆ: ಗ್ರಾಅಪ 671 ಗ್ರಾಪಂಅ 2024

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.